## ಸಂಪರ್ಕ ರಸ್ತೆಗೆ ತಡೆ ಗೋಡೆ ನಿರ್ಮಾಣ

# ಶಾಸಕ ಬೆಲ್ಲದ ಮನೆಗೆ ಮುತ್ತಿಗೆ

**ಹುಬ್ಬಳ್ಳಿ**

ನಗರದ ಗೋಕುಲ ರಸ್ತೆಯ ರೇಣುಕಾ ನಗರದ ರಾಯರ ಮಠದ ಬಳಿ ಸಂಪರ್ಕ ರಸ್ತೆಗೆ ತಡೆಗೋಡೆ ನಿರ್ಮಾಣ ಮಾಡಿದ್ದನ್ನು ವಿರೋಧಿಸಿ ಸಾರ್ವಜನಿಕರು ಶನಿವಾರ ಶಾಸಕ ಅರವಿಂದ ಬೆಲ್ಲದ ಮನೆಗೆ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಿದರು.

ವಿಮಾನ ನಿಲ್ದಾಣ ಪ್ರಾಧಿಕಾರ ಹಾಗೂ ಕೆಐಎಡಿಬಿ ಅಧಿಕಾರಿಗಳು ಕಂಪೌಂಡ ನಿರ್ಮಿಸುವ ಮೂಲಕ ಅಕ್ರಮ ಸಕ್ರಮದಾರರ ಮನೆಗಳಿಗೆ ಇದ್ದಿರುವಂತಹ ಒಂದು ಸಂಪರ್ಕ ರಸ್ತೆಯನ್ನು ಬಂದ್ ಮಾಡಿದ್ದಾರೆ. ಇದರಿಂದಾಗಿ ಜನತೆ ಪರದಾಡುವಂತಹ ಸ್ಥಿತಿ ನಿರ್ಮಾಣವಾಗಲಿದೆ. ಅದಕ್ಕಾಗಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಶಾಸಕರಿಗೆ ಆಗ್ರಹಿಸಿದರು.



ಶಾಸಕ ಅರವಿಂದ ಬೆಲ್ಲದ ಮನೆಗೆ ಮುತ್ತಿಗೆ ಹಾಕಿದ ಜನತೆ.

ಬಂದ್ ಮಾಡಿರುವಂತಹ ಸಂಪರ್ಕ ರಸ್ತೆಯನ್ನು ಕೂಡಲೇ ತೆರವುಗೊಳಿಸುವಂತೆ ಶಾಸಕ ಅರವಿಂದ ಬೆಲ್ಲದ ಅವರಿಗೆ ಒತ್ತಾಯಿಸಿದ ಜನತೆ, ಈ ಸಂಪರ್ಕ ರಸ್ತೆಯಲ್ಲಿ ನಿರ್ಮಾಣವಾದ ಕಂಪೌಂಡ ತೆರವು ಮಾಡದೇ ಹೋದಲ್ಲಿ ಬರುವ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು. ಕೂಡಲೇ ಅಧಿಕಾರಿಗಳಿಗೆ ಈ ಕುರಿತಂತೆ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಲಾಗುವುದು. ಸಾರ್ವಜನಿಕರಿಗೆ ಯಾವುದೇ ರೀತಿಯಿಂದ ತೊಂದರೆಯಾಗದಂತೆ ಕ್ರಮ ಜರುಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದು ಶಾಸಕ ಬೆಲ್ಲದ ಭರವಸೆ ನೀಡಿದ ಹಿನ್ನೆಲೆಯಲ್ಲಿ ಪ್ರತಿಭಟನೆಯನ್ನು ಹಿಂಪಡೆಯಲಾಯಿತು. ವಿಮಾನ ನಿಲ್ದಾಣ ಮೇಲ್ದರ್ಜೆಗೆ ಏರಿಸುವ ಕಾಮಗಾರಿಯಿಂದಾಗಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ವ್ಯಕ್ತಪಡಿಸಿದ್ದಾರೆ.